## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಸರ್ಕಾರಿ ಶಾಲೆಗಳ ಶಿಕ್ಷಕರ 2015–16 ನೇ ಸಾಲಿನ ವರ್ಗಾವಣೆ ಪ್ರಕ್ರಿಯೆ ನಡೆಸುವ ಬಗ್ಗೆ.

**ಓದಲಾಗಿದೆ:**
1. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 11 ಶಾಸನ 2015; ದಿನಾಂಕ:13/05/2015.
2. ಆಯುಕ್ತರು, ಸಾ.ಶಿ.ಇ, ಬೆಂಗಳೂರು ರವರ ಪತ್ರ ಸಂಖ್ಯೆ:ಸಿ3(7) ಪ್ರಾ.ಶಿ.ವರ್ಗ/01/2015–16; ದಿನಾಂಕ:08/06/2015.

* * *

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ದಿನಾಂಕ:13/05/2015 ರ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2015 ನ್ನು ದಿನಾಂಕ:13/05/2015 ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ. ಸದರಿ ತಿದ್ದುಪಡಿ ಅಧಿನಿಯಮದಲ್ಲಿ ಸೆಕ್ಷನ್–5 ಮತ್ತು 6 ಕ್ಕೆ ತಿದ್ದುಪಡಿ ತರಲಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007 ಕ್ಕೆ ತಿದ್ದುಪಡಿ ತರುವ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಸದರಿ ತಿದ್ದುಪಡಿಗೆ ಹೆಚ್ಚಿನ ಕಾಲಾವಕಾಶ ತೆಗೆದುಕೊಳ್ಳುವುದರಿಂದ ಪ್ರಸಕ್ತ 2015–16 ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸಲು ಸರ್ಕಾರದ ಆಡಳಿತಾತ್ಮಕ ಆದೇಶ (Executive Order) ಹೊರಡಿಸಲು ಮೇಲೆ ಓದಲಾದ (2) ರ ದಿನಾಂಕ:08/06/2015 ರ ಪತ್ರದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಸಾಲಿನ ವರ್ಗಾವಣೆ ಪ್ರಕ್ರಿಯೆಯನ್ನು ನಡೆಸಲು ಸರ್ಕಾರದ ಆಡಳಿತಾತ್ಮಕ ಆದೇಶ (Executive Order) ಹೊರಡಿಸಲು ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ:

### ಸರ್ಕಾರದ ಆದೇಶ ಸಂಖ್ಯೆ:ಇಡಿ 19 ಇಟಿಆರ್ 2015 (ಭಾಗ–1);

### ಬೆಂಗಳೂರು, ದಿನಾಂಕ:24/06/2015.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2015 ರ ತಿದ್ದುಪಡಿಗಳನ್ನು ಪೂರ್ಣವಾಗಿ ಅಳವಡಿಸಿಕೊಳ್ಳುವುದರೊಂದಿ 2015–16 ನೇ ಸಾಲಿನ ಶಿಕ್ಷಕರ ವರ್ಗಾವಣೆಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ಅಧಿನಿಯಮ ಮತ್ತು ನಿಯಮಗಳಡಿಯಲ್ಲಿ ಕಲ್ಪಿಸಿರುವ ಅವಕಾಶಗಳನ್ವಯ ಮತ್ತು ಈ ಕೆಳಗಿನ ಮೂರು

→

ಅಂಶಗಳನ್ನು ಪರಿಗಣಿಸಿ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿದೆ:

1. ಪರಸ್ಪರ ವರ್ಗಾವಣೆಗಳು ತೀವ್ರತರ ಕಾಯಿಲೆಯ ಪ್ರಕರಣಗಳು ಹಾಗೂ ಅಂಗವಿಕಲ ಪ್ರಕರಣಗಳು, ವಿಧವಾ ಶಿಕ್ಷಕಿಯರ ಪ್ರಕರಣಗಳು, ಸೈನಿಕ ಪ್ರಕರಣಗಳು, ಮಾನ್ಯತೆ ಪಡೆದ ಶಿಕ್ಷಕರ ಸಂಘದ ಚುನಾಯಿತ ಪ್ರತಿನಿಧಿಗಳ ವರ್ಗಾವಣೆಗಳನ್ನು ಹೊರತುಪಡಿಸಿ ಒಟ್ಟು ಕೋರಿಕೆ ಮೇರೆಗಿನ ಮತ್ತು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳ ಸಂಖ್ಯೆ ಆಯಾ ಜೇಷ್ಠತಾ ಘಟಕದ ಕೇಡರ್‌ನಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ 5% ರಷ್ಟನ್ನು ಹಾಗೂ ಅಂತರ್ ಘಟಕೀಯ ಜೇಷ್ಠತಾ ವರ್ಗಾವಣೆಗಳ ಸಂದರ್ಭದಲ್ಲಿ, ಪತಿ–ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿದ್ದ ಪಕ್ಷದಲ್ಲಿ 1% ರಷ್ಟು, ಪತಿ–ಪತ್ನಿ ಇಬ್ಬರಲ್ಲಿ ಒಬ್ಬರು ಸರ್ಕಾರಿ ನೌಕರರಾಗಿದ್ದಲ್ಲಿ ಇವರಿಗೆ 1% ರಷ್ಟು ಮತ್ತು ಇತರ ಮಹಿಳಾ ಹಾಗೂ ಪುರುಷರ ಸಾಮಾನ್ಯ ಗುಂಪಿಗೆ 1% ರಷ್ಟು ಮೀರಬಾರದು, ಒಟ್ಟಾರೆ 8% ರಷ್ಟನ್ನು ಮೀರಬಾರದು.

2. ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ನಿಯಮಾನುಸಾರ ಮಕ್ಕಳ ಹಾಜರಾತಿ ಕಡಿಮೆ ಇರುವ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಶಿಕ್ಷಕರ ವರ್ಗಾವಣೆ ಕೌನ್ಸೆಲ್ಲಿಂಗ್‌ನಲ್ಲಿ ಖಾಲಿ ಸ್ಥಾನಗಳಿಗೆ ಪರಿಗಣಿಸಬಾರದು.

3. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2015 ರ ತಿದ್ದುಪಡಿಗಳನ್ನು ಪೂರ್ಣವಾಗಿ ಅಳವಡಿಸಿಕೊಳ್ಳುವುದು ಹಾಗೂ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು–2011 ರ ನಿಯಮ–7(2) ರಂತೆ ವೇಯ್ಟೇಜ್‌ನ್ನು ನಿಗದಿಪಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಎಸ್.ಹೊನ್ನೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

ಇವರಿಗೆ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ
4. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು